FEBRUARY 12, 2026

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ನಾಯಕತ್ವ ಬದಲಾವಣೆ ಕುರಿತು ವರಿ ್ಠರು ಕೈಗೊಳ್ಳುವ ತೀರ್ಮಾನವೇ ಅಂತಿಮ–ವರಿಷ್ಠರ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕು–ಮುಖ್ಯಮಂತ್ರಿ ಹೇಳಿಕೆ.

- ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲೇ ಅಂಗಾಂಗ ಕಸಿ ಕೇಂದ್ರಗಳ ಸ್ಥಾಪನೆಗೆ ಸರ್ಕಾರದ ಚಿಂತನೆ–ಆರೋಗ್ಯ ಸಚಿವರಿಂದ ಮಾಹಿತಿ.

- 600 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚುವ ಸರ್ಕಾರದ ನಿರ್ಧಾರದ ವಿರುದ್ಧ ವಿಪಕ್ಷ ಬಿಜೆಪಿ ಮುಖಂಡರ ಅಸಮಾಧಾನ.

- ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿಮುಕ್ತ ದೇವದಾಸಿಯರ ಮರು ಸಮೀಕ್ಷಾ ವರದಿ ಸರ್ಕಾರಕ್ಕೆ ಸಲ್ಲಿಕೆ.

ಈಗ ವಾರ್ತೆಗಳ ವಿವರ

*******

ನಾಯಕತ್ವ ಬದಲಾವಣೆ ಕುರಿತು ವರಿ ್ಠರು ಕೈಗೊಳ್ಳುವ ತೀರ್ಮಾನವೇ ಅಂತಿಮ. ಆ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2026–27 ನೇ ಸಾಲಿನ ಮುಂಗಡಪತ್ರ ಮಂಡನೆಗೆ ಸಿದ್ಧತೆಗಳು ನಡೆಯುತ್ತಿದ್ದು, ಮಂಡನೆಗೆ ಪೂರ್ವಭಾವಿಯಾಗಿ ವಿವಿಧ ಇಲಾಖೆ ಸಚಿವರು, ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುತ್ತಿದೆ. ಆಯವ್ಯಯ ಮಂಡನೆ ದಿನಾಂಕವನ್ನು ಶೀಘ್ರವೇ ಪ್ರಕಟಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

*******

ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲೇ ಅಂಗಾಂಗ ಕಸಿ ಕೇಂದ್ರಗಳನ್ನು ಸ್ಥಾಪಿಸುವ ನಿಟ್ಟಿನಲ್ಲಿ ಸರ್ಕಾರ ಚಿಂತನೆ ನಡೆಸಿದೆ ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ ಹೇಳಿದ್ದಾರೆ. ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಲಾಗಿದ್ದ ಅಂಗಾಂಗ ದಾನ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಅಂಗಾಂಗ ದಾನದಲ್ಲಿ ಕರ್ನಾಟಕ ದೇಶದಲ್ಲೇ

ಮೂರನೇ ಸ್ಥಾನದಲ್ಲಿದೆ. ಒಬ್ಬರು ಮೃತ ವ್ಯಕ್ತಿ ಎಂಟು ಜನರ ಜೀವ ಉಳಿಸಲು ಸಾಧ್ಯವಿರುವ ಅವಕಾಶ ಕುರಿತು ಹೆಚ್ಚು ಪ್ರಚಾರದ ಅಗತ್ಯವಿದೆ. ಎಂದರು. ವ್ಯಸನ ಮುಕ್ತ ಕರ್ನಾಟಕವನ್ನು ನಿರ್ಮಿಸಲು ಕೇವಲ ಕಾನೂನು ರೂಪಿಸಿದರೆ ಸಾಲದು, ಸಮಾಜದಲ್ಲಿ ವ್ಯಾಪಕ ಜನಜಾಗೃತಿಯೂ ಅಗತ್ಯ ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ ಹೇಳಿದರು.

*******

ಭದ್ರಾ ಮೇಲ್ದಂಡೆ ಯೋಜನೆಗೆ ಅಗತ್ಯಕ್ಕೆ ತಕ್ಕಂತೆ ಅನುದಾನ ನೀಡಲಾಗುತ್ತಿದ್ದು, ಹಂತ ಹಂತವಾಗಿ ಅನುದಾನ ನೀಡಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಚಿತ್ರದುರ್ಗ ತಾಲೂಕಿನ ಬ್ರಹ್ಮವಿದ್ಯಾನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ಬೃಹತ್ ಯೋಜನೆ ಒಂದೇ ಬಾರಿಗೆ ಪೂರ್ಣಗೊಳ್ಳುವುದಿಲ್ಲ. ಹಂತ, ಹಂತವಾಗಿ ಪೂರ್ಣಗೊಳ್ಳುತ್ತದೆ. ಹೀಗಾಗಿ ಅಗತ್ಯಕ್ಕೆ ತಕ್ಕಂತೆ ಅನುದಾನ ಬಿಡುಗಡೆ ಮಾಡಲಾಗುವುದು ಎಂದರು. ಎಸ್.ಸಿ., ಎಸ್.ಟಿ. ಸೇರಿದಂತೆ ಎಲ್ಲಾ ಹಿಂದುಳಿದ ವರ್ಗದವರಿಗೂ ರಾಜ್ಯ ಸರ್ಕಾರ ಹೆಚ್ಚಿನ ಅನುದಾನ ಬಿಡುಗಡೆ ಮಾಡುತ್ತಿದೆ. ಹಾಗೆಯೇ ನೀರಾವರಿ, ಲೋಕೋಪಯೋಗಿ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಮರ್ಪಕ ಅನುದಾನ ನೀಡಲಾಗುತ್ತಿದೆ. ವಿರೋಧ ಪಕ್ಷದವರು ಸುಮ್ಮನೆ ಆರೋಪಿಸುತ್ತಿದ್ದಾರೆ ಎಂದು ಸಚಿವರು ಹೇಳಿದರು.

*******

ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿಮುಕ್ತ ದೇವದಾಸಿಯರ ಮರು ಸಮೀಕ್ಷಾ ವರದಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸರ್ಕಾರಕ್ಕೆ ಸಲ್ಲಿಸಿದರು. ರಾಜ್ಯದ 15 ಜಿಲ್ಲೆಗಳಾದ ಬೆಳಗಾವಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಧಾರವಾಡ, ಹಾವೇರಿ, ಗದಗ, ಕಲಬುರ್ಗಿ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಬಳ್ಳಾರಿ ಮತ್ತು ವಿಜಯನಗರದಲ್ಲಿ ಮರು ಸಮೀಕ್ಷೆಯಿಂದ ಒಟ್ಟು 23,395 ವಿಮುಕ್ತ ದೇವದಾಸಿಯರು ಗುರುತಿಸಿಕೊಂಡಿದ್ದಾರೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಮರು ಸಮೀಕ್ಷೆಯ ವಿಶ್ಲೇ ಣಾ ವರದಿಯಲ್ಲಿ ವಿಮುಕ್ತ ದೇವದಾಸಿಯರು ಹಾಗೂ 1ನೇ ತಲೆಮಾರು, 2 ಮತ್ತು 3ನೇ ತಲೆಮಾರಿನ ಕುಟುಂಬದವರ ಮಾಹಿತಿ, ವಿಮುಕ್ತ ದೇವದಾಸಿಯರ ಪುನರ್ವಸತಿಗಾಗಿ ಮಾಡಲಾಗಿರುವ ಶಿಫಾರಸ್ಸುಗಳು ವರದಿಯ ಪ್ರಮುಖ ಅಂಶಗಳಾಗಿವೆ.

*******

ಇ–ಸ್ವತ್ತು 2.0 ತಂತ್ರಾಂಶದಲ್ಲಿ ಕೆಲವು ಬದಲಾವಣೆಗಳನ್ನು ಮಾಡುವ ಮೂಲಕ ಸಾರ್ವಜನಿಕರಿಗೆ ತ್ವರಿತ ಸೇವೆ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಅದರಂತೆ ನಮೂನೆ–11 ಬಿ ಖಾತೆಗಳನ್ನು ನಮೂನೆ–11 ಎ ಖಾತೆಗಳಾಗಿ ಪರಿವರ್ತನೆ ಮಾಡಿಕೊಳ್ಳಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ. ಹೊಸ ಬಹುಮಹಡಿ ಕಟ್ಟಡ ನಿರ್ಮಾಣಕ್ಕೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ಕಲ್ಪಿಸಿಕೊಡುವ ಮೂಲಕ ತ್ವರಿತ ಸೇವೆಗೆ ಅವಕಾಶ ಒದಗಿಸಲಾಗಿದೆ ಎಂದು ತಿಳಿಸಿದ್ದಾರೆ.

*******

ರಾಜ್ಯಾದ್ಯಂತ 676 ಸರ್ಕಾರಿ ಶಾಲೆಗಳನ್ನು ಮುಚ್ಚುವ ಮೂಲಕ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ದುರಾಡಳಿತ ಪ್ರದರ್ಶಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದ್ದಾರೆ. ಹಣಕಾಸಿನ ಶಿಸ್ತು, ಸಂಪನ್ಮೂಲಗಳ ನಿರ್ವಹಣೆಯಲ್ಲಿ ವಿಫಲವಾಗಿ, ರಾಜ್ಯದ ಆರ್ಥಿಕತೆಯನ್ನು ಬರಿದು ಮಾಡಿರುವ ರಾಜ್ಯ ಸರ್ಕಾರದಿಂದ ಶ್ರೀಸಾಮಾನ್ಯ ಬೆಲೆ ತೆರಬೇಕಾದ ಸ್ಥಿತಿಗೆ ಬಂದೊದಗುವ ಜೊತೆಗೆ ಮಕ್ಕಳ ಶಿಕ್ಷಣಕ್ಕೆ ಕತ್ತರಿ ಬೀಳುವಂತಾಗಿದೆ ಎಂದು ಸಾಮಾಜಿಕ ಮಾಧ್ಯಮದ ಮೂಲಕ ದೂರಿದ್ದಾರೆ. ರಾಜ್ಯದ ಅಭಿವೃದ್ಧಿ, ಮೂಲಸೌಕರ್ಯ ಹಾಗೂ ಗುಣಮಟ್ಟದ ಶಿಕ್ಷಣದ ನೀಡಬೇಕಾದ ಸರ್ಕಾರ, ತನ್ನ ಪ್ರಮುಖ ಕರ್ತವ್ಯಕ್ಕೆ ಚ್ಯುತಿ ತಂದೊದಗಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

*******

ರಾಜ್ಯದಲ್ಲಿ 2 ಲಕ್ಷ 40 ಸಾವಿರ ಹುದ್ದೆಗಳು ಖಾಲಿಯಿದ್ದು, ರಾಜ್ಯ ಸರ್ಕಾರ,ನೇಮಕಾತಿಯಲ್ಲಿ ನಿರ್ಲಕ್ಷ್ಯ ವಹಿಸಿದೆ ಎಂದು ವಿಧಾನಪರಿ ‘ತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಹೇಳಿದ್ದಾರೆ. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಳ ಮೀಸಲಾತಿ ಇತ್ಯರ್ಥವಾಗಿಲ್ಲ ಎಂಬ, ಸಬೂಬು ಹೇಳುವ ರಾಜ್ಯ ಸರ್ಕಾರಕ್ಕೆ, ನಿರುದ್ಯೋಗಿಗಳ ಬಗ್ಗೆ ಕಾಳಜಿ ಇಲ್ಲ ಎಂದು ಟೀಕಿಸಿದರು. ಖಾತರಿ ಯೋಜನೆಗಳಿಂದ ತಲಾ ಆದಾಯ ಹೆಚ್ಚಾಗುವುದಿಲ್ಲ, ತಾತ್ಕಾಲಿಕ ಪರಿಹಾರದಿಂದ ಜನರಿಗೆ ಯಾವುದೇ ಪ್ರಯೋಜನವಾಗುವುದಿಲ್ಲ. ಅದರ ಬದಲಿಗೆ ಶಾಶ್ವತ ಆದಾಯದಂತಹ ಪರಿಹಾರ ಸೃಷ್ಟಿಸಬೇಕಿದೆ ಎಂದರು. ನಿಗಮ ಮಂಡಳಿ ಮುಖ್ಯಸ್ಥರಿಗೆ ಸಂಪುಟ ಸಚಿವರ ಸ್ಥಾನಮಾನ ನೀಡುವ ಮೂಲಕ ರಾಜ್ಯದ ಖಜಾನೆ ಬರಿದು ಮಾಡಲಾಗುತ್ತಿದೆ. ಖಾತ್ರಿ ಅನು ್ಠಾನ ಸಮಿತಿಯ ತಾಲ್ಲೂಕು, ಜಿಲ್ಲಾಮಟ್ಟದ ಸದಸ್ಯರನ್ನು ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–42 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ತೋಟಗಾರಿಕಾ ಉತ್ಪನ್ನಗಳಾದ ವಿವಿಧ ಹಣ್ಣುಗಳು, ಅಣಬೆ ಮತ್ತು ಜೇನು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಕೊಪ್ಪಳದ ತೋಟಗಾರಿಕಾ ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದೆ. ಇಂದು ಬೆಳಿಗ್ಗೆ 11 ಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಮೇಳ ಉದ್ಘಾಟಿಸಲಿದ್ದು, ಸಂಸದ ಕೆ. ರಾಜಶೇಖರ ಹಿಟ್ನಾಳ, ಶಾಸಕರಾದ ಜಿ.ಜನಾರ್ಧನ ರೆಡ್ಡಿ, ಶಶೀಲ್ ನಮೋಶಿ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಜಗತ್ತಿನ ದುಬಾರಿ ಅಣಬೆ ಯರ್ಸಗುಂಬ ಮೇಳದ ಪ್ರಮುಖ ಆಕ ್ಷಣೆಯಾಗಿದೆ. ಮೇಳದಲ್ಲಿ ಜೇನು ಸಾಕಾಣಿಕೆ ಕುರಿತು ತಾಂತ್ರಿಕ ಕಾರ್ಯಾಗಾರ ಆಯೋಜಿಸಲಾಗಿದೆ. ಈ ಕುರಿತು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಕೃ ್ಣ ಉಕ್ಕುಂದ ಅವರು..

ಧ್ವನಿ–ಕೃಷ್ಣ ಉಕ್ಕುಂದ– ಸೆಕೆಂಡ್ಸ್

*******

ಆಹಾರ ಭದ್ರತಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಎಚ್.ಕೃಷ್ಣ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ವಿವಿಧ ಇಲಾಖೆ ಅಧಿಕಾರಿಗಳ ಜೊತೆ ಮಡಿಕೇರಿಯಲ್ಲಿ ನಡೆದ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಆಹಾರ ಇಲಾಖೆ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಯಲ್ಲಿ ಸಾರ್ವಜನಿಕ ವಿತರಣಾ ವ್ಯವಸ್ಥೆ ದುರುಪಯೋಗ ಆಗದಂತೆ ತಡೆಯಬೇಕು. ಮಧ್ಯಾಹ್ನದ ಉಪಹಾರ ಯೋಜನೆಯನ್ನು ವಿದ್ಯಾರ್ಥಿಗಳಿಗೆ ಸರಿಯಾಗಿ ತಲುಪಿಸಬೇಕು ಎಂದರು. ಕೊಡಗು ಜಿಲ್ಲೆಯ ಹಾಡಿಗಳಲ್ಲಿರುವ ಮಕ್ಕಳಿಗೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಸಬೇಕು. ಅಪೌಷ್ಠಿಕತೆ ಉಂಟಾಗದಂತೆ ಗಮನ ಹರಿಸುವುದು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ಕರ್ತವ್ಯವಾಗಿದೆ. ಕರ್ತವ್ಯಲೋಪ ಆಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

*******

ಜಿಲ್ಲೆಯಲ್ಲಿ ಅಕ್ರಮ ಮದ್ಯ, ಮಾದಕ ವಸ್ತುಗಳು ಹಾಗೂ ಕಳ್ಳಭಟ್ಟಿ ಸಾರಾಯಿ ಅಕ್ರಮ ಮಾರಾಟ ಮತ್ತು ಸಾಗಾಣಿಕೆ ನಿಯಂತ್ರಿಸಲು ಸಂಬಂಧಿತ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಶರಣಪ್ಪ ಸಲಾದಪುರ ಸೂಚಿಸಿದ್ದಾರೆ. ಯಾದಗಿರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಅಕ್ರಮ ಮದ್ಯ ಹಾಗೂ ಮಾದಕ ವಸ್ತುಗಳು ಸಾರ್ವಜನಿಕರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತವೆ. ಇಂಥ ಕುಕೃತ್ಯಗಳಲ್ಲಿ ತೊಡಗಿರುವವರ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ನಾಯಕತ್ವ ಬದಲಾವಣೆ ಕುರಿತು ವರಿಷ್ಠರು ಕೈಗೊಳ್ಳುವ ತೀರ್ಮಾನವೇ ಅಂತಿಮ–ವರಿಷ್ಠರ ತೀರ್ಮಾನಕ್ಕೆ ಎಲ್ಲರೂ ಬದ್ದರಾಗಿರಬೇಕು– ಮುಖ್ಯಮಂತ್ರಿ ಹೇಳಿಕೆ.

ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲೇ ಅಂಗಾಂಗ ಕಸಿ ಕೇಂದ್ರಗಳ ಸ್ಥಾಪನೆಗೆ ಸರ್ಕಾರದ ಚಿಂತನೆ–ಆರೋಗ್ಯ ಸಚಿವರಿಂದ ಮಾಹಿತಿ.

600 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚುವ ಸರ್ಕಾರದ ನಿರ್ಧಾರದ ವಿರುದ್ಧ ವಿಪಕ್ಷ ಬಿಜೆಪಿ ಮುಖಂಡರ ಅಸಮಾಧಾನ.

ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷಾ ವರದಿ ಸರ್ಕಾರಕ್ಕೆ ಸಲ್ಲಿಕೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

*******